ಕರ್ನಾಟಕ ಸರ್ಕಾರ

ಸಿಆಸುಇ 174 ಹೈಕಕೋ 2020

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನ ಸೌಧ,
ಬೆಂಗಳೂರು, ದಿನಾಂಕ: 25.02.2021

**ಅಧಿಸೂಚನೆ**

ಕರ್ನಾಟಕ (ಹೈದರಾಬಾದ್ ಕರ್ನಾಟಕ ಪ್ರದೇಶಕ್ಕಾಗಿ ರಾಜ್ಯಪಾಲರ ವಿಶೇಷ ಹೊಣೆಗಾರಿಕೆ) ಆದೇಶ, 2013ರ 2ನೇ ಖಂಡದಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಕರ್ನಾಟಕದ ರಾಜ್ಯಪಾಲರು ಈ ಮೂಲಕ ಕರ್ನಾಟಕ ಖಾಸಗಿ ಅನುದಾನರಹಿತ ಶೈಕ್ಷಣಿಕ ಸಂಸ್ಥೆಗಳ (ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಪ್ರವೇಶ ನಿಯಂತ್ರಣ) ಆದೇಶ 2013ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಈ ಕೆಳಕಂಡಂತೆ ಆದೇಶ ಮಾಡಿರುತ್ತಾರೆ. ಎಂದರೆ:-

**ಆದೇಶ**

1. **ಶೀರ್ಷಿಕೆ ಮತ್ತು ಪ್ರಾರಂಭ.**- (1) ಈ ಆದೇಶವನ್ನು ಕರ್ನಾಟಕ ಖಾಸಗಿ ಅನುದಾನರಹಿತ ಶೈಕ್ಷಣಿಕ ಸಂಸ್ಥೆಗಳ (ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಪ್ರವೇಶ ನಿಯಂತ್ರಣ) (ತಿದ್ದುಪಡಿ) ಆದೇಶ 2021 ಎಂದು ಕರೆಯತಕ್ಕದ್ದು.

(2) ಇದು ಸರ್ಕಾರಿ ರಾಜ್ಯಪತ್ರದಲ್ಲಿ ಪ್ರಕಟಣೆಯಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. 3ನೇ ಖಂಡಿಕೆಯ ತಿದ್ದುಪಡಿ.- ಕರ್ನಾಟಕ ಖಾಸಗಿ ಅನುದಾನರಹಿತ ಶೈಕ್ಷಣಿಕ ಸಂಸ್ಥೆಗಳ (ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಪ್ರವೇಶ ನಿಯಂತ್ರಣ) ಆದೇಶ 2013ರಲ್ಲಿನ ಖಂಡಿಕೆ 3ರಲ್ಲಿನ "ಮತ್ತು ಬಳ್ಳಾರಿ" ಎಂಬ ಪದಗಳಿಗೆ ಬದಲಾಗಿ "ಬಳ್ಳಾರಿ ಮತ್ತು ವಿಜಯನಗರ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

**ವಜೂಭಾಯಿ ವಾಲಾ**
**ಕರ್ನಾಟಕ ರಾಜ್ಯಪಾಲರು**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

25/1/2021

**(ಮಾರುತಿ ಪ್ರಸನ್ನ ಬಿ. ವಿ.)**
ಸರ್ಕಾರದ ಉಪ ಕಾರ್ಯದರ್ಶಿ
(ಹೈದ್ರಾಬಾದ್ - ಕರ್ನಾಟಕ ವಿಶೇಷ ಕೋಶ)
ಸಿಆಸುಇ

**ಇವರಿಗೆ:**
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ (ಘಟಕ 2), ಆರ್. ವಿ ಕಾಲೇಜು ಅಂಚೆ, ಮೈಸೂರು ರಸ್ತೆ, ಬೆಂಗಳೂರು-560059 ಕರ್ನಾಟಕ ವಿಶೇಷ ರಾಜ್ಯಪತ್ರದ ಭಾಗ IV ಎ-ನಲ್ಲಿ ತಕ್ಷಣದ ಪ್ರಕಟಣೆಗಾಗಿ ಮತ್ತು ಸರ್ಕಾರದ ವಿವಿಧ ಇಲಾಖೆಗಳ ಬಳಕೆಗಾಗಿ 1000 ಪ್ರತಿಗಳನ್ನು ಸರಬರಾಜು ಮಾಡುವುದಕ್ಕಾಗಿ.

**ಪ್ರತಿ:**
1. ಘನತೆವೆತ್ತ ರಾಷ್ಟ್ರಪತಿಗಳ ಕಾರ್ಯದರ್ಶಿಗಳು, ರಾಷ್ಟ್ರಪತಿ ಭವನ, ನವ ದೆಹಲಿ-110001
2. ಘನತೆವೆತ್ತ ರಾಜ್ಯಪಾಲರ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು.
3. ಕಾರ್ಯದರ್ಶಿಗಳು, ಕೇಂದ್ರ ಗೃಹ ಮಂತ್ರಾಲಯ, ಭಾರತ ಸರ್ಕಾರ, ಎನ್‌ಡಿಸಿಸಿ-2ನೇ ಕಟ್ಟಡ, ಜೈಸಿಂಗ್ ರಸ್ತೆ, ನವ ದೆಹಲಿ - 110001
4. ಕಾರ್ಯದರ್ಶಿಗಳು, ಕಾನೂನು ಮತ್ತು ನ್ಯಾಯ ಇಲಾಖೆ, ಭಾರತ ಸರ್ಕಾರ, ನವ ದೆಹಲಿ - 110001.
5. ಮಾನ್ಯ ಮುಖ್ಯ ಮಂತ್ರಿಗಳ ಅಪರ ಮುಖ್ಯ ಕಾರ್ಯದಶಿಗಳು,
6. ಮಾನ್ಯ ಅಧ್ಯಕ್ಷರು, ಸಚಿವ ಸಂಪುಟ ಉಪ ಸಮಿತಿ (ಅನುಚ್ಛೇಧ 371ಜೆ) ಹಾಗೂ ಮಾನ್ಯ ಉಪ ಮುಖ್ಯ ಮಂತ್ರಿಗಳು, ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಇಲಾಖೆ.
7. ಹೆಚ್ಚುವರಿ ಪ್ರತಿ / ಶಾಖಾ ರಕ್ಷಾ ಕಡತ.

************